**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು**

**ನಿಯಮ-೩೩೦ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ:**

ವಿಷಯ:

ಅನುದಾನಿತ ಶಾಲಾ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರರಿಗೆ ಯಾವುದೇ ಆರೋಗ್ಯ ವಿಮಾ ಯೋಜನೆಯ ಸೌಲಭ್ಯವಿಲ್ಲದೆ ಇವರುಗಳು ಧೀರ್ಘ ಕಾಲದಿಂದ ತುಂಬಾ ತೊಂದರೆಗೊಳಗಾಗಿದ್ದಾರೆ. ಆದ ಕಾರಣ, ಇವರನ್ನು ಜ್ಯೋತಿ ಸಂಜೀವಿನಿ ಯೋಜನೆಯ ವ್ಯಾಪ್ತಿಗೆ ತರದೆ ಇರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸಲಾಗಿದೆ.

ಉತ್ತರ:

ಅನುದಾನಿತ ಶಾಲಾ ಕಾಲೇಜುಗಳ ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ, ೧೯೮೩ ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (classification, regulation and prescription of curricula) ನಿಯಮಗಳು, 1995ರ ವ್ಯಾಪ್ತಿಗೆ ಒಳಪಡುತ್ತಾರೆ. ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ.ಆದುದರಿಂದ ಅನುದಾನಿತ ಸಿಬ್ಬಂದಿಗಳು ಜ್ಯೋತಿ ಸಂಜೀವಿನಿ ಯೋಜನೆಯ ವ್ಯಾಪ್ತಿಗೆ ಬರುವುದಿಲ್ಲ.

ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ವ್ಯಾಪ್ತಿಗೆ ಒಳಪಡುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಹಾಗೂ ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ-ii (3)ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೂ ಅರ್ಹರಾಗಿರುವುದಿಲ್ಲ.

ಸಂಖ್ಯೆ: ಇಪಿ 297 ಎಸ್‌ಇಎಸ್ ೨೦೨೦

(ಎಸ್. ಸುರೇಶ್ ಕುಮಾರ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ

ಹಾಗೂ ಸಕಾಲ ಸಚಿವರು